# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.02/2025 ದಿನಾಂಕ: 16-01-2025

## ಪ್ರಕಟಣೆ – ಸಿಇಟಿ – 2025

2025ನೇ ಸಾಲಿನ ಇಂಜಿನಿಯರಿಂಗ್, ಯೋಗ ಮತ್ತು ನ್ಯಾಚುರೋಪತಿ, ಬಿ-ಫಾರ್ಮ ಮತ್ತು ಫಾರ್ಮ-ಡಿ, ಕೃಷಿ ವಿಜ್ಞಾನ ಕೋರ್ಸುಗಳು, ವೆಟರಿನರಿ ಹಾಗು ಬಿ.ಎಸ್.ಸಿ. (ನರ್ಸಿಂಗ್) ವೃತ್ತಿಪರ ಕೋರ್ಸುಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು, **ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು** ದಿನಾಂಕ 16-04-2025 ಮತ್ತು 17-04-2025 ರಂದು ನಡೆಸಲು ದಿನಾಂಕಗಳನ್ನು ನಿಗದಿಪಡಿಸಿದೆ.

**ಸಾಮಾನ್ಯ ಪ್ರವೇಶ ಪರೀಕ್ಷೆ 2025ರ ವೇಳಾಪಟ್ಟಿ**

| ದಿನಾಂಕ | ದಿನ | ಸಮಯ | ವಿಷಯ | ಅಂಕಗಳು |
|---|---|---|---|---|
| 16-04-2025 | ಬುಧವಾರ | ಬೆಳಿಗ್ಗೆ 10-30 ರಿಂದ 11-50ರವರೆಗೆ | ಭೌತಶಾಸ್ತ್ರ Physics | 60 |
| | | ಮಧ್ಯಾಹ್ನ 2-30 ರಿಂದ 3-50ರವರೆಗೆ | ರಸಾಯನಶಾಸ್ತ್ರ Chemistry | 60 |
| 17-04-2025 | ಗುರುವಾರ | ಬೆಳಿಗ್ಗೆ 10-30 ರಿಂದ 11-50ರವರೆಗೆ | ಗಣಿತಶಾಸ್ತ್ರ Mathematics | 60 |
| | | ಮಧ್ಯಾಹ್ನ 2-30 ರಿಂದ 3-50ರವರೆಗೆ | ಜೀವಶಾಸ್ತ್ರ Biology | 60 |

**ಹೊರನಾಡು ಹಾಗೂ ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ**
(ಬೆಂಗಳೂರು, ಬೆಳಗಾವಿ, ವಿಜಯಪುರ ಮತ್ತು ಮಂಗಳೂರು ಜಿಲ್ಲಾ ಕೇಂದ್ರಗಳಲ್ಲಿ ಮಾತ್ರ)

| | | | | |
|---|---|---|---|---|
| 18-04-2025 | ಶುಕ್ರವಾರ | ಬೆಳಿಗ್ಗೆ 10.30 ರಿಂದ 11.30ರ ವರೆಗೆ | 4ನೇ ತರಗತಿಯ ಮಟ್ಟದ | 50 |

- ✓ ಸಿಇಟಿ-2025ಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ **23-01-2025** ರಿಂದ ಪ್ರಾರಂಭಿಸಲಾಗುವುದು.
- ✓ ಅಭ್ಯರ್ಥಿಗಳಿಗೆ ಲಾಗಿನ್ ಸಂದರ್ಭದಲ್ಲಿ ನಮೂದಿಸುವ ಮೊಬೈಲ್ ಸಂಖ್ಯೆಗೆ ಒಟಿಪಿ (OTP) ಕಳುಹಿಸಿ ಪ್ರಮಾಣೀಕರಿಸಿದ ನಂತರ ಅರ್ಜಿ ಭರ್ತಿ ಮಾಡಲು ಅವಕಾಶ ನೀಡಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಅವರದೇ ಮೊಬೈಲ್ ಸಂಖ್ಯೆಯನ್ನು ಮಾತ್ರ ನೀಡಬೇಕು. ಒಂದು ಮೊಬೈಲ್ ಸಂಖ್ಯೆಯನ್ನು ಒಬ್ಬ ಅಭ್ಯರ್ಥಿ ಮಾತ್ರ ಉಪಯೋಗಿಸಬಹುದು. ಮೊಬೈಲ್ ಸಂಖ್ಯೆ ಬದಲಾವಣೆ ಯಾವುದೇ ಹಂತದಲ್ಲಿ ಪರಿಗಣಿಸುವುದಿಲ್ಲ.
- ✓ ಆನ್‌ಲೈನ್ ಅರ್ಜಿಯಲ್ಲಿ ಅಭ್ಯರ್ಥಿಯು ನಮೂದಿಸುವ ಜಾತಿ / ಜಾತಿ ಆದಾಯ ಪ್ರಮಾಣ ಪತ್ರ ಮತ್ತು 371(ಜೆ) ಆರ್‌ಡಿ ಸಂಖ್ಯೆಯ ಆಧಾರದ ಮೇಲೆ ಅಭ್ಯರ್ಥಿಗಳ ಮೀಸಲಾತಿ ವಿವರಗಳನ್ನು ಪಡೆಯಲಾಗುವುದು.
- ✓ ಅದೇ ರೀತಿ SATS (Student Achievement Tracking System) ಸಂಖ್ಯೆಯ ಆಧಾರದ ಮೇಲೆ ಅಭ್ಯರ್ಥಿಯ ವ್ಯಾಸಂಗದ ವಿವರಗಳನ್ನು ವೆಬ್‌ಸರ್ವೀಸ್ ಮೂಲಕ ಪಡೆಯಲಾಗುವುದು.
- ✓ ನಂತರ ಅಭ್ಯರ್ಥಿಗಳಿಗೆ Claims Certificate ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ನೀಡಲಾಗುವುದು.
- ✓ Claims Certificate ನಲ್ಲಿ "Successfully Verified" ಎಂದು ನಮೂದಿಸಿದ್ದರೆ ಅಂತಹ ಅಭ್ಯರ್ಥಿಗಳು ದಾಖಲೆ ಪರಿಶೀಲನೆಗೆ ಯಾವುದೇ ಕಚೇರಿಗೆ / ಕಾಲೇಜಿಗೆ ಹೋಗುವ ಅವಶ್ಯಕತೆ ಇರುವುದಿಲ್ಲ. ನಂತರದ ದಿನಗಳಲ್ಲಿ ಸಿಇಟಿ ಫಲಿತಾಂಶದ ನಂತರ ವೆರಿಫಿಕೇಶನ್ ಸ್ಲಿಪ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in

- "Claimed Verified OR Claimed not verified OR not Claimed" ಎಂದು Claims Certificate ನಮೂದಾಗಿದ್ದರೆ ಅಭ್ಯರ್ಥಿಗಳು 2ನೆ ಪಿಯುಸಿ / 12ನೇ ತರಗತಿಯನ್ನು ವ್ಯಾಸಂಗ ಮಾಡುತ್ತಿರುವ ಆಯಾ ಕಾಲೇಜಿಗೆ ಭರ್ತಿ ಮಾಡಿದ ಅರ್ಜಿಯನ್ನು ಮತ್ತು ಕ್ಲೇಮ್ಸ್ ಮಾಡಿರುವ ಎಲ್ಲಾ ಮೂಲ ದಾಖಲೆಗಳನ್ನು ಪ್ರಾಂಶುಪಾಲರಿಗೆ ತೋರಿಸಿ ಒಂದು ಸೆಟ್ ಪ್ರತಿಗಳನ್ನು ಕ್ಲೇಮ್ಸ್ ಸರ್ಟಿಫಿಕೇಟ್ ನೊಂದಿಗೆ ಸಲ್ಲಿಸುವುದು ಕಡ್ಡಾಯವಾಗಿದೆ. ಕಾಲೇಜಿನವರು ಕ್ಲೇಮ್ಸ್ ಸರ್ಟಿಫಿಕೇಟ್ ನೊಂದಿಗೆ ಪರಿಶೀಲನೆ ಮಾಡಿದ ನಂತರ ಅಭ್ಯರ್ಥಿಯ ವಿವರಗಳನ್ನು ಅನುಮೋದಿಸುತ್ತಾರೆ.
- ಪ್ರತಿ ಹಂತದ ಪ್ರಕ್ರಿಯೆ ಕುರಿತು ಅಭ್ಯರ್ಥಿಯ ಮೊಬೈಲ್‌ಗೆ ಸಂದೇಶ ಸ್ವೀಕೃತವಾಗುತ್ತದೆ.
- ಪ್ರಾಧಿಕಾರವು ರಾಜ್ಯದಲ್ಲಿರುವ ಎಲ್ಲಾ ಪಿಯುಸಿ ಕಾಲೇಜುಗಳಿಗೆ ಲಾಗಿನ್ ನೀಡಿ ಅಭ್ಯರ್ಥಿಗಳಿಂದ ಭರ್ತಿ ಮಾಡಿದ ಅರ್ಜಿಗಳನ್ನು ಪರಿಶೀಲಿಸಲು ಸೂಚಿಸಲಾಗಿದೆ. ಕಾಲೇಜಿನವರು ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ವಿವರಗಳನ್ನು ಪಡೆದು, ಪರಿಶೀಲನೆ ಮಾಡಲು ತಂತ್ರಾಂಶವನ್ನು ಸಿದ್ಧಪಡಿಸಿದೆ.
- ಅಭ್ಯರ್ಥಿಗಳು ಬಿಇಒ ಕಚೇರಿಗೆ ಪರಿಶೀಲನೆಗೆ ಹೋಗುವ ಅವಶ್ಯಕತೆ ಇರುವುದಿಲ್ಲ.
- ವಿಶೇಷ ಕ್ಯಾಟಗರಿಗಳಾದ ಎನ್‌ಸಿಸಿ, ಕ್ರೀಡೆ, ಸೈನಿಕ, ಮಾಜಿ ಸೈನಿಕ, ಸಿಎಪಿಎಫ್, ಮಾಜಿ ಸಿಎಪಿಎಫ್, ಸ್ಕೌಟ್ಸ್ ಅಂಡ್ ಗೈಡ್ಸ್, ಆಂಗ್ಲೋ ಇಂಡಿಯನ್ಸ್ ಕೋಟದ ಅಡಿಯಲ್ಲಿ ಮೀಸಲಾತಿ ಬಯಸುವ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಕೆಇಎ ನಲ್ಲಿ ಖುದ್ದಾಗಿ ಸಲ್ಲಿಸಲು ಪ್ರತ್ಯೇಕವಾಗಿ ಪರೀಕ್ಷೆ ನಂತರ ದಿನಾಂಕಗಳನ್ನು ನೀಡಲಾಗುವುದು.
- ಸಿಇಟಿ-2025 ರ ಅರ್ಜಿಯು ಎಲ್ಲಾ ಕೋರ್ಸುಗಳಿಗೆ ಸಾಮಾನ್ಯ ಅರ್ಜಿಯಾಗಿರುವವರಿಂದ ವೈದ್ಯಕೀಯ, ದಂತ ವೈದ್ಯಕೀಯ ಮತ್ತು ಆಯುಷ್ ಪ್ರವೇಶಾತಿಗೆ **ಅಭ್ಯರ್ಥಿಗಳು** ಸಿಇಟಿ-2025ಕ್ಕೆ ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡು, ಆನ್‌ಲೈನ್ ಅರ್ಜಿ ಸಲ್ಲಿಸಿ, ಅರ್ಜಿ ಶುಲ್ಕ ಪಾವತಿಸುವುದು ಕಡ್ಡಾಯವಾಗಿರುತ್ತದೆ.
- ಅದೇ ರೀತಿ ಆರ್ಕಿಟೆಕ್ಚರ್, ಬಿಪಿಟಿ, ಬಿಪಿಒ, **ಬಿಎಸ್‌ಸಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳ ಪ್ರವೇಶಾತಿಗೆ ಸಿಇಟಿ-2025 ರ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ.**
- ಈ ಬಾರಿ ವಿದ್ಯಾರ್ಥಿಗಳು ಯಾವುದೇ ದಾಖಲೆಗಳನ್ನು Online ನಲ್ಲಿ Upload ಮಾಡುವ ಅಗತ್ಯವಿರುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು